ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ, ಕುಣಿಗಲ್.

ಸಿ.ಸಿ.ನಂ.1667/2021

ಸಿ.ಡಬ್ಲ್ಯೂ -05
ಪಿ.ಡಬ್ಲ್ಯೂ - 04

ಸಾಕ್ಷಿದಾರನ ಹೆಸರುಃ- ಗುರುಕುಮಾರ್
ತಂದೆ ಹೆಸರು ಃ- ಚಿಕ್ಕಹನುಮಯ್ಯ
ವಯಸ್ಸು ಃ- 45 ವರ್ಷ
ಉದ್ಯೋಗ ಃ- ವ್ಯವಸಾಯ
ವಾಸ ಃ- ಹುರಳಗೆರೆ , ಕುಣಿಗಲ್ ತಾ

**ಸಾಕ್ಷಿಗೆ ದಿಃ 15.12.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಸಾಕ್ಷಿಗೆ ನಿಪಿ-2 ಮತ್ತು 3 ರಲ್ಲಿ ತನ್ನ ಸಹಿಗಳನ್ನು ಗುರುತಿಸಿದ್ದು ಅವುಗಳನ್ನು ನಿಪಿ-2(ಸಿ) ಮತ್ತು 3(ಸಿ) ಎಂದು ಗುರುತಿಸಲಾಯಿತು. ಸದರಿಗಳನ್ನು ಅಮೃತೂರು ಪೊಲೀಸ್ ಠಾಣೆಯಲ್ಲಿ ಈಗ್ಗೆ 3 ವರ್ಷಗಳ ಹಿಂದೆ ಮಾಡಿರುತ್ತೇನೆ. ನನ್ನ ಜೊತೆ ಬೇರೆ ಯಾರು ಯರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ, ಆಗ ಸಮಯ ಸುಮಾರು 4 ಗಂಟೆಯಾಗಿತ್ತು. ನನ್ನ ಸಮಕ್ಷಮ ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲಿಗಾಗಿ ನ್ಯಾಯಾಲಯದ ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಗಿದೆ.)**

**ಪಾಟೀ ಸವಾಲುಃ- ಮಾನ್ಯ ಸ.ಸ.ಅ ರವರಿಂದ.**

ದಿನಾಂಕಃ 06-12-2020 ರಂದು 4-30 ರಿಂ 5-30 ರ ಸಮಯದಲ್ಲಿ ಪೊಲೀಸರು ಘಟನಾ ಸ್ಥ,ಳಕ್ಕೆ ಬಂದು ಚಾಸಾ.3 ಮತ್ತು 4 ರವರ ಸಮಕ್ಷಮ ಪಂಚನಾಮೆ ಮಾಡಿ ಖಚ್ಚಾ ನಕಾಶೆಯನ್ನು ತಯಾರಿಸಿ ಅಪಘಾತಪಡಿಸಿದ ವಾಹನಗಳನ್ನು ಜಪ್ತು ಮಾಡಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)
ಓ.ಹೇ.ಕೇ.ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.
ಕುಣಿಗಲ್.